# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1 ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 914 |
| 2 ಸದಸ್ಯರ ಹೆಸರು | : | ಶ್ರೀ ಶರವಣ ಟಿ.ಎ (ವಿಧಾನ ಸಭೆಯಿಂದ ಚುನಾಯಿತರಾದವರು) |
| 3 ಉತ್ತರಿಸುವ ದಿನಾಂಕ | : | 22-02-2024 |
| 4 ಉತ್ತರಿಸುವವರು | : | ಉಪ ಮುಖ್ಯಮಂತ್ರಿಗಳು |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರಿನ ಸಿ.ವಿ.ರಾಮನ್‌ನಗರ ವಿಧಾನಸಭಾ ಕ್ಷೇತ್ರದ ಜೀವನ್ ಭೀಮಾನಗರದ ವ್ಯಾಪ್ತಿಯಲ್ಲಿ ಬರುವ ಹೆಚ್.ಎ.ಎಲ್ ಎರಡನೇ ಹಂತದಲ್ಲಿರುವ 18ನೇ ಮುಖ್ಯ ರಸ್ತೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಪ್ರತಿ ವರ್ಷ ಬೀಳುವ ಮಳೆಯಿಂದಾಗಿ ಪ್ರವಾಹ ಉಂಟಾಗಿ ಮನೆಗಳಿಗೆ ನೀರು ನುಗ್ಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸದರಿ ಪ್ರದೇಶವು ತಗ್ಗು ಪ್ರದೇಶವಾಗಿರುತ್ತದೆ. |
| ಆ) | ಹಾಗಿದ್ದಲ್ಲಿ, ಪ್ರವಾಹದಲ್ಲಿ ನೊಂದ ಸಂತ್ರಸ್ತರಿಗೆ ನೀಡಿರುವ ಪರಿಹಾರಗಳೇನು; (ಪೂರ್ಣ ವಿವರ ನೀಡುವುದು) | |
| ಇ) | ಬಿ.ಬಿ.ಎಂ.ಪಿ ಅಧಿಕಾರಿಗಳು ಪ್ರವಾಹ ಪೀಡಿತವಾಗುವ ಪ್ರದೇಶಗಳಿಗೆ ಭೇಟಿ ನೀಡಿ ಶಾಶ್ವತ ಪರಿಹಾರಕ್ಕಾಗಿ ಮತ್ತು ದೊಮ್ಮಲೂರಿನ ಮೇಲು ಸೇತುವೆಯನ್ನು ಸೆಗ್‌ಮೆಂಟ್ ಸೇತುವೆಯನ್ನಾಗಿ ಪರಿವರ್ತಿಸಲು ಉದ್ದೇಶಿಸಲಾಗಿದೆಯೇ; ಹಾಗಿದ್ದಲ್ಲಿ ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು; ಮತ್ತು ಯಾವ ಕಾಲಮಿತಿಯಲ್ಲಿ ಸದರಿ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು; | ಹೌದು.<br>• ದೊಮ್ಮಲೂರಿನ ಮೇಲು ಸೇತುವೆಯನ್ನು ಸೆಗ್‌ಮೆಂಟ್ ಸೇತುವೆಯನ್ನಾಗಿ ಪರಿವರ್ತಿಸಲು ಅಂದಾಜು ಪಟ್ಟಿಯ ವಿಸ್ತೃತ ಯೋಜನಾ ವರದಿ ತಯಾರಿಕೆ ಹಂತದಲ್ಲಿರುತ್ತದೆ.<br>• KPTCL ಇಲಾಖೆಯ ಎರಡು (220 KV Line) ಕೇಬಲ್‌ಗಳನ್ನು ಸ್ಥಳಾಂತರಿಸಲು ಸದರಿ ಇಲಾಖೆಯವರು ರೂ.169.38/- ಲಕ್ಷಗಳ ಅಂದಾಜು ಪಟ್ಟಿಯನ್ನು ನೀಡಿರುತ್ತಾರೆ.<br>ಈ ಮೇಲ್ಕಂಡ ಅಂಶಗಳನ್ನು ಪರಿಗಣಿಸಿ, ಸ್ಥಳಕ್ಕೆ ಅನುಗುಣವಾಗಿ ವಿಸ್ತೃತ ಯೋಜನಾ ವರದಿ ಹಾಗೂ ಅಂದಾಜು ಪಟ್ಟಿಯನ್ನು ತಯಾರಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು. |

| | | |
|---|---|---|
| ಈ) | ಸದರಿ ಪ್ರದೇಶದ ಜನರು ಮಳೆಗಾಲದಲ್ಲಿ ಮತ್ತೊಮ್ಮೆ ಪ್ರವಾಹಕ್ಕೆ ತುತ್ತಾಗದಿರಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ಪ್ರಸ್ತುತ ಮಳೆಗಾಲದಲ್ಲಿ ಈಗಾಗಲೇ ವಾರ್ಷಿಕ ನಿರ್ವಹಣಾ ಕಾಮಗಾರಿಯ ಅಡಿಯಲ್ಲಿ ನಿರಂತರವಾಗಿ ಸದರಿ ಪ್ರದೇಶದಲ್ಲಿ ಹೂಳೆತ್ತಲಾಗುತ್ತಿರುತ್ತದೆ ಹಾಗೂ ಸದರಿ ಪ್ರದೇಶದಲ್ಲಿ ಬಿದ್ದ ಮಳೆನೀರನ್ನು ಹೊರಹಾಕಲು Jack Well ನಿರ್ಮಿಸಲಾಗಿರುತ್ತದೆ. |

**ಸಂಖ್ಯೆ: ನಅಇ 78 ಎಂಎನ್‌ವೈ 2024 (ಇ)**

(ಡಿ.ಕೆ. ಶಿವಕುಮಾರ್)
ಉಪ ಮುಖ್ಯಮಂತ್ರಿ